# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/45./22-23

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 05-05-2022

## ಕಛೇರಿ ಆದೇಶ

ವಿಷಯ: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರ ಅಧೀನದಲ್ಲಿರುವ ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ವಿಭಾಗವನ್ನು ವಿಸರ್ಜಿಸಿ, ಸದರಿ ವಿಭಾಗದ ಕಾಮಗಾರಿಗಳನ್ನು ಆಯಾ ವಲಯದ ಸಂಬಂಧಪಟ್ಟ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ಟಿ.ಇ.ಸಿ ವಿಭಾಗಗಳಿಗೆ ಹಂಚಿಕೆ ಮಾಡುವ ಬಗ್ಗೆ.

ಉಲ್ಲೇಖ: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರ ವರದಿ ದಿನಾಂಕ: 25-04-2022

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರ ಅಧೀನದಲ್ಲಿರುವ ಕಾರ್ಯಪಾಲಕ ಅಭಿಯಂತರರು, "ರಸ್ತೆ ಮೂಲಭೂತ ಸೌಕರ್ಯ" (Road Infra) ವಿಭಾಗವನ್ನು ಕಾಮಗಾರಿ ವಿಭಾಗದ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಈ ತಕ್ಷಣದಿಂದ ಜಾರಿಗೆ ಬರುವಂತೆ ವಿಸರ್ಜಿಸಿ ಆದೇಶಿಸಿದೆ ಹಾಗೂ ಸದರಿ ವಿಭಾಗದ ಕಾಮಗಾರಿಗಳನ್ನು ಆಯಾ ವಲಯದ ಸಂಬಂಧಪಟ್ಟ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ಟಿ.ಇ.ಸಿ ವಿಭಾಗಗಳಿಗೆ ಈ ಕೆಳಕಂಡಂತೆ ಮರು ಹಂಚಿಕೆ ಮಾಡಿ ಆದೇಶಿಸಿದೆ.

| ಕ್ರ. ಸಂ | ಯೋಜನೆಯ ಹೆಸರು | ಹಂಚಿಕೆ ಮಾಡಿರುವ ಕಾ.ಪಾ.ಅ ವಿಭಾಗ |
|---|---|---|
| 1. | ಬಳ್ಳಾರಿ ಮುಖ್ಯರಸ್ತೆ ಮತ್ತು ಜಯಮಹಲ್ ರಸ್ತೆ ಅಗಲೀಕರಣ | ಕಾ.ಪಾ.ಅ (ರ.ಮೂ.ಸೌ-ಪೂರ್ವ) |
| 2. | ವರ್ತೂರು-ಗುಂಜೂರು ಮುಖ್ಯರಸ್ತೆಯ ಮೊದಲನೇ ಹಂತದ ಅಗಲೀಕರಣ ಯೋಜನೆ | ಕಾ.ಪಾ.ಅ (ರ.ಮೂ.ಸೌ-ಮಹದೇವಪುರ) |
| 3. | ವಾಟಲ್ ನಾಗರಾಜ್ ರಸ್ತೆ ಮತ್ತು ಹಳೆ ಮೈಸೂರು ರಸ್ತೆ, ಮೈ-ಜಂಕ್ಷನ್ ನ ಗ್ರೇಡ್ ಸೆಪರೇಟರ್ ನಿರ್ಮಾಣ ಯೋಜನೆ | ಕಾ.ಪಾ.ಅ (ರ.ಮೂ.ಸೌ-ಪಶ್ಚಿಮ) |
| 4. | ಸ್ಯಾಂಕಿ ರಸ್ತೆ ಅಗಲೀಕರಣ ಮತ್ತು ಸದಾಶಿವನಗರ ಬಾಷ್ಯಂ ವೃತ್ತದ ಗ್ರೇಡ್ ಸೆಪರೇಟರ್ ನಿರ್ಮಾಣ ಯೋಜನೆ | ಕಾ.ಪಾ.ಅ (ರ.ಮೂ.ಸೌ-ಪಶ್ಚಿಮ) |
| 5. | ಹೊರವರ್ತುಲ ರಸ್ತೆ ಕೆರೆಕೋಡಿ (ವೀರಭದ್ರನಗರ) ಜಂಕ್ಷನ್ ನಲ್ಲಿ ಗ್ರೇಡ್ ಸೆಪರೇಟರ್ ನಿರ್ಮಾಣ ಯೋಜನೆ | ಕಾ.ಪಾ.ಅ (ರ.ಮೂ.ಸೌ-ರಾ.ರಾ.ನಗರ) |
| 6. | ಪಾಲಿಕೆ ಅನುದಾನದ ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳಿಗೆ ಸಂಬಂಧಿಸಿದ ಎಲ್ಲಾ ನಿರ್ವಹಣಾ ಕಾಮಗಾರಿಗಳು | ಕಾ.ಪಾ.ಅ (ರ.ಮೂ.ಸೌ-ಟಿ.ಇ.ಸಿ) |
| 7. | ಪಾಲಿಕೆ ವ್ಯಾಪ್ತಿಯ ಆಯ್ದ ಜಂಕ್ಷನ್ ಗಳ ಅಭಿವೃದ್ಧಿ ಮತ್ತು ನಿರ್ವಹಣೆ | ಕಾ.ಪಾ.ಅ (ರ.ಮೂ.ಸೌ-ಟಿ.ಇ.ಸಿ) |

ಮೇಲ್ಕಂಡ ಆದೇಶದನ್ವಯ ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

5/5/22

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

5/5/22 5/5/22

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

ಪ್ರತಿಯನ್ನು: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
; ಎಲ್ಲಾ ವಲಯ ಆಯುಕ್ತರುಗಳಿಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) /: ವಿಶೇಷ ಆಯುಕ್ತರು (ಆಡಳಿತ) ರವರಿಗೆ ಕಳುಹಿಸಿದೆ.
: ಪ್ರಧಾನ ಅಭಿಯಂತರರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಆದೇಶವನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳು, ಸೂಚಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ : ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

Office of the IT Advisor
No. 87/22-23
13/05

CO1
13/05